## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ನಿರ್ಮಾಣ ಕಾಮಗಾರಿಗಳೂ ಸೇರಿದಂತೆ ಸರಕು ಮತ್ತು ಸೇವೆಗಳ ಸಂಗ್ರಹಣೆಯ ಟೆಂಡರ್ ಮತ್ತು ಅಂದಾಜುಗಳ ಪರಿಶೀಲನೆಗೆ ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯನ್ನು ರಚಿಸುವ ಕುರಿತು.

ಓದಲಾಗಿದೆ : ಸರ್ಕಾರದ ಆದೇಶ ಸಂ:ಆಇ 522 ವೆಚ್ಚ-12/2021, ಬೆಂಗಳೂರು, ದಿನಾಂಕ:13.12.2021.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುವ ಮತ್ತು ಎಲ್ಲಾ ಟೆಂಡರ್‌ದಾರರಿಗೆ ಸ್ಪರ್ಧೆ ಮತ್ತು ಸಮಾನ ಅವಕಾಶವನ್ನು ಖಚಿತಪಡಿಸುವ ಉದ್ದೇಶದಿಂದ ರೂ.50.00 ಕೋಟಿ ಮೀರಿದ ಎಲ್ಲಾ ನಿರ್ಮಾಣ ಕಾಮಗಾರಿಗಳೂ ಸೇರಿದಂತೆ ಸರಕು ಮತ್ತು ಸೇವೆಗಳ ಸಂಗ್ರಹಣೆಗಾಗಿ ತಯಾರಿಸಿದ ಟೆಂಡರ್ ಮತ್ತು ಅಂದಾಜುಗಳ ಟೆಂಡರ್ ಪೂರ್ವ ಪರಿಶೀಲನೆಯನ್ನು ಅವುಗಳ ಪ್ರಕಟಣಾ ಪೂರ್ವದಲ್ಲಿ ಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಅಂತಹ ಒಂದು ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯನ್ನು ರಚಿಸಲು ಮತ್ತು ಸದರಿ ಸಮಿತಿಗೆ ಒದಗಿಸಬೇಕಾದ ಸೌಲಭ್ಯಗಳು ಹಾಗೂ ಸಮಿತಿಯ ಸದಸ್ಯರುಗಳಿಗೆ ನೀಡಲಾಗುವ ಸಂಭಾವನೆಯನ್ನು ನಿಗಧಿಪಡಿಸಲು ತೀರ್ಮಾನಿಸಲಾಗಿರುತ್ತದೆ.

ಆದುದರಿಂದ, ಈ ಕೆಳಕಂಡಂತೆ ಆದೇಶ.

### ಸರ್ಕಾರದ ಆದೇಶ ಸಂ:ಆಇ 522 ವೆಚ್ಚ-12/2021, ಬೆಂಗಳೂರು, ದಿನಾಂಕ:07-05-2022

1. ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಇಬ್ಬರು ಇತರೆ ಸದಸ್ಯರನ್ನೊಳಗೊಂಡ ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯನ್ನು ಈ ಕೆಳಗಿನಂತೆ ರಚಿಸಲು ಸರ್ಕಾರವು ಹರ್ಷಿಸುತ್ತದೆ.

| | |
|---|---|
| ಮಾನ್ಯ ಶ್ರೀಮತಿ ನ್ಯಾಯಮೂರ್ತಿ ರತ್ನಕಲಾ,<br>ನಿವೃತ್ತ ನ್ಯಾಯಮೂರ್ತಿಗಳು,<br>ಕರ್ನಾಟಕ ಉಚ್ಚ ನ್ಯಾಯಾಲಯ. | ಸಮಿತಿಯ ಮುಖ್ಯಸ್ಥರು |
| ಶ್ರೀ ಬಿ.ಜಿ.ಗುರುಪಾದಸ್ವಾಮಿ,<br>ನಿವೃತ್ತ ಸರ್ಕಾರದ ಕಾರ್ಯದರ್ಶಿಗಳು,<br>ಜಲಸಂಪನ್ಮೂಲ ಇಲಾಖೆ, ಕರ್ನಾಟಕ ಸರ್ಕಾರ | ತಾಂತ್ರಿಕ ಪರಿಣಿತರು |
| ಶ್ರೀ ಕೆ.ನಂದಕುಮಾರ್,<br>ನಿವೃತ್ತ ನಿರ್ದೇಶಕರು,<br>ಕರ್ನಾಟಕ ರಾಜ್ಯ ಲೆಕ್ಕಪರಿಶೋದನೆ ಮತ್ತು ಲೆಕ್ಕಪತ್ರ<br>ಇಲಾಖೆ, ಕರ್ನಾಟಕ ಸರ್ಕಾರ | ಆರ್ಥಿಕ ಪರಿಣಿತರು |

2. ಸಮಿತಿಯಲ್ಲಿರುವ ಮಾನ್ಯ ನಿವೃತ್ತ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರೆ ಇಬ್ಬರು ಸದಸ್ಯರ ಸೇವಾ ಅವಧಿ ಮತ್ತು ಕಾರ್ಯಾಚರಣೆಯ ಷರತ್ತು ಮತ್ತು ನಿಬಂಧನೆಗಳು ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ನಿಗಧಿಪಡಿಸಲಾಗಿರುವಂತೆ ಇರುತ್ತವೆ.

3. ಮೇಲೆ ರಚಿಸಲಾದ ಸಮಿತಿಯ ಕಾರ್ಯಾಲಯವು ಲೋಕೋಪಯೋಗಿ ಇಲಾಖೆಯಲ್ಲಿ ಕಾರ್ಯನಿರ್ವಹಿಸತಕ್ಕದ್ದು. ಮಾನ್ಯ ನಿವೃತ್ತ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರೆ ಇಬ್ಬರು ಸದಸ್ಯರುಗಳಿಗೆ ಸುಸಜ್ಜಿತವಾದ ಕಛೇರಿ, ಚಾಲಕರ ಸಮೇತ ಸರ್ಕಾರಿ ವಾಹನ ಹಾಗೂ ಸಹಾಯಕ ಸಿಬ್ಬಂದಿಗಳು ಮತ್ತು ಇತರೆ ಕಛೇರಿ ಸಿಬ್ಬಂದಿಗಳನ್ನು ಲೋಕೋಪಯೋಗಿ ಇಲಾಖೆಯಿಂದ ಒದಗಿಸತಕ್ಕದ್ದು.

4. ಮಾನ್ಯ ನಿವೃತ್ತ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಇತರೆ ಇಬ್ಬರು ಸದಸ್ಯರುಗಳಿಗೆ ಕ್ರಮವಾಗಿ ಮಾಸಿಕ ರೂ.2.00 ಲಕ್ಷ ಮತ್ತು ರೂ.1.00 ಲಕ್ಷಗಳ ಸಂಚಿತ ಸಂಭಾವನೆಯನ್ನು ನಿಗಧಿಪಡಿಸಲಾಗಿದೆ. ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯ ಪ್ರಕಾರ್ಯಕ್ಕೆ ಸಂಬಂಧಿಸಿದಂತೆ, ಪ್ರವಾಸ ಕೈಗೊಂಡಲ್ಲಿ, ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಅನ್ವಯವಾಗುವ ದರಗಳಲ್ಲಿ ಪಾವತಿಸಲಾಗುವುದು. ಸಮಿತಿಯ ಪ್ರತಿ ಸದಸ್ಯರುಗಳಿಗೆ ಮಾಸಿಕ ರೂ.3,000/- ಗಳು ಮಿತಿಯೊಳಗೆ ಬ್ರಾಡ್ ಬ್ಯಾಂಡ್ ಸೇರಿದಂತೆ ಗೃಹ ಮತ್ತು ಮೊಬೈಲ್ ದೂರವಾಣಿ ವೆಚ್ಚವನ್ನು ಪಾವತಿಸಲಾಗುವುದು.

5. ಮೇಲೆ ನಿಗಧಿಪಡಿಸಿದ ಸಂಚಿತ ಸಂಭಾವನೆ ಮತ್ತು ಭತ್ಯೆಗಳ ಹೊರತಾಗಿ, ಇತರೆ ಯಾವುದೇ ಭತ್ಯೆಗಳನ್ನು ಒದಗಿಸಲಾಗುವುದಿಲ್ಲ.

6. ಸಮಿತಿಯ ಉದ್ದೇಶಕ್ಕಾಗಿ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ಇವರು ನಿರ್ಧರಿಸತಕ್ಕದ್ದು ಹಾಗೂ ಲೋಕೋಪಯೋಗಿ ಇಲಾಖೆಗೆ ಒದಗಿಸಲಾದ ಅನುದಾನದಲ್ಲಿ ಈ ಸಂಬಂಧದ ವೆಚ್ಚವನ್ನು ಭರಿಸತಕ್ಕದ್ದು.

ಈ ಆದೇಶವು ತಕ್ಷಣದಿಂದ ಜಾರಿಗೆ ಬರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಐ.ಎಸ್.ಎನ್.ಪ್ರಸಾದ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ:

(1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.

(2) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು.

(3) ಮಹಾಲೇಖಪಾಲರು (ಎ&ಇ), ಕರ್ನಾಟಕ ಸರ್ಕಾರ, ಬೆಂಗಳೂರು.

(4) ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ / ಕರ್ನಾಟಕ ವಿಧಾನ ಪರಿಷತ್ತು.

(5) ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

(6) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

(7) ಕಾರ್ಯದರ್ಶಿಗಳು, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.

(8) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.

(9) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.

(10) ರಾಜ್ಯದ ಎಲ್ಲಾ ಇಲಾಖಾ ಮುಖ್ಯಸ್ಥರು.

(11) ರಾಜ್ಯದ ಎಲ್ಲಾ ನಿಗಮ ಮತ್ತು ಮಂಡಳಿಗಳ ಕಾರ್ಯನಿರ್ವಹಣಾಧಿಕಾರಿಗಳು.

(12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.

(13) ಸರ್ಕಾರದ ವಿಶೇಷ ಕಾರ್ಯದರ್ಶಿಗಳು/ಸರ್ಕಾರದ ಅಪರ ಕಾರ್ಯದರ್ಶಿಗಳು/ಸರ್ಕಾರದ ಜಂಟಿ ಕಾರ್ಯದರ್ಶಿಗಳು/ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.

(14) ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.